"1997ರ ಕರ್ನಾಟಕ ಕರಾರು ವಾಹನಗಳ (ಆರ್ಜನೆ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಸಾರಿಗೆ ಮಂತ್ರಿಗಳು): ಮಾನ್ಯ ಅಧ್ಯಕ್ಷರೇ 1997ರ ಕರ್ನಾಟಕ ಕರಾರು ವಾಹನಗಳ (ಆರ್ಜನೆ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:*ವಿಧೇಯಕವನ್ನು ಮಂಡಿಸಲಾಗಿದೆ.*

(ಇ) ಕರ್ನಾಟಕ ರೇಷ್ಮೆ ಹುಳುತಳಿ, ರೇಷ್ಮೆಗೂಡು ಮತ್ತು ರೇಷ್ಮೆನೂಲು (ಉತ್ಪಾದನೆ, ಸರಬರಾಜು, ಹಂಚಿಕೆ ಮತ್ತು ಮಾರಾಟದ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 1997 ಮಂಡನೆಗೆ ಅನುಮತಿ ಕೋರಿಕೆ

*ಅನುಬಂಧ-III

ಶ್ರೀ ಎಂ. ವರದೇಗೌಡ (ರೇಷ್ಮೆ ರಾಜ್ಯ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 1997 ರ ಕರ್ನಾಟಕ ರೇಷ್ಮೆ ಹುಳುತಳಿ, ರೇಷೆಗೂಡು ಮತ್ತು ರೇಷ್ಮೆ ನೂಲು (ಉತ್ಪಾದನೆ, ಸರಬರಾಜು ಹಂಚಿಕೆ ಮತ್ತು ಮಾರಾಟದ ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"1997ರ ಕರ್ನಾಟಕ ರೇಷ್ಮೆ ಹುಳು, ರೇಷ್ಮೆಗೂಡು ಮತ್ತು ರೇಷ್ಮೆ ನೂಲು (ಉತ್ಪಾದನೆ, ಸರಬರಾಜು, ಹಂಚಿಕೆ ಮತ್ತು ಮಾರಾಟದ ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ.ವರದೇಗೌಡ (ರೇಷ್ಮೆ ರಾಜ್ಯ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ರೇಷ್ಮೆ ಹುಳು, ರೇಷ್ಮೆಗೂಡು ಮತ್ತು ರೇಷ್ಮೆ ನೂಲು (ಉತ್ಪಾದನೆ, ಸರಬರಾಜು, ಹಂಚಿಕೆ ಮತ್ತು ಮಾರಾಟದ ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: *ವಿಧೇಯಕವನ್ನು ಮಂಡಿಸಲಾಗಿದೆ.*